**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 999 (1039)
ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12.03.2026
ಉತ್ತರಿಸುವವರು : ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆ | ಉತ್ತರ |
| --- | --- | --- |
| ಅ) | ರಾಜ್ಯದಲ್ಲಿ ಸರ್ಕಾರಿ ಇಲಾಖೆ, ಅನುದಾನಿತ ಸಂಸ್ಥೆಗಳಲ್ಲಿ ಹಾಗೂ ನಿಗಮ ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು, ವೃಂದವಾರು ಇಲಾಖಾವಾರು ಮತ್ತು ನಿಗಮವಾರು ಮಾಹಿತಿ ನೀಡುವುದು | ರಾಜ್ಯದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಒಟ್ಟು 2,84,88' ಹುದ್ದೆಗಳು ಖಾಲಿ ಇರುತ್ತವೆ. ಈ ಖಾಲಿ ಹುದ್ದೆಗಳ ವರ್ಗವಾರು ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.<br>ಮುಂದುವರೆದು, ನಿಗಮ ಮಂಡಳಿಗಳಲ್ಲಿ ಒಟ್ಟು 1,01,295 ಹುದ್ದೆಗಳು ಖಾಲಿಯಿರುತ್ತವೆ. ಈ ಖಾಲಿ ಹುದ್ದೆಗಳ ಇಲಾಖಾವಾರು ವಿವರವನ್ನು ಅನುಬಂಧ-2ರಲ್ಲಿ ಒದಗಿಸಿದೆ. |
| ಆ) | ಶಿಕ್ಷಣ ಇಲಾಖೆಯಲ್ಲಿ ಮತ್ತು ಪೊಲೀಸ್ ಇಲಾಖೆಯಲ್ಲಿ ಹೆಚ್ಚಿನ ಹುದ್ದೆಗಳು ಖಾಲಿ ಇರುವುದರಿಂದ ಶೈಕ್ಷಣಿಕ ದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ದೃಷ್ಟಿಯಿಂದ ತೊಂದರೆಯಾಗುವುದಿಲ್ಲವೇ; | ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ **5,327** ಹುದ್ದೆಗಳ ಭರ್ತಿಗೆ ಹಾಗೂ ಒಳಾಡಳಿತ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ **557** ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯು ಮಂಜೂರಾತಿ ನೀಡಿರುತ್ತದೆ. ಖಾಲಿ ಇರುವ ಇನ್ನುಳಿದ ಹುದ್ದೆಗಳನ್ನು ಹಂತ-ಹಂತವಾಗಿ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ |
| ಇ) | ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಜರುಗಿಸಲಾಗಿದೆ; ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು | |
| ಈ) | ಸರ್ಕಾರದ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ, ಕೆಲಸದ ಒತ್ತಡ ಹಾಗೂ ಗುಣಮಟ್ಟ ಕಡಿಮೆಯಾಗುವುದಿಲ್ಲವೇ; ಇದನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕಳೆದ 3 ವರ್ಷಗಳಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳ ಮೂಲಕ ಇಲಾಖೆಗಳಲ್ಲಿ ಖಾಲಿ ಇರುವ 8157 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ಮುಂದುವರೆದು 3081 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.<br>ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2024 ದಿನಾಂಕ 07.06.2024ರನ್ವಯ ಗ್ರೂಪ್-ಡಿ, ಹಾಗೂ ಗ್ರೂಪ್-ಸಿ ಹುದ್ದೆಗಳಾದ ವಾಹನ ಚಾಲಕರು, ದತ್ತಾಂಶ ನಮೂದು ಸಹಾಯಕ (ಬೆರಳಚ್ಚುಗಾರ) ಹಾಗೂ ಶೀಘ್ರಲಿಪಿಗಾರ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾತ್ರ ಭರ್ತಿ ಮಾಡುವುದು ರಾಜ್ಯ ಸರ್ಕಾರದ ನೀತಿಯಾಗಿರುತ್ತದೆ. ಅದರಂತೆ ವಿವಿಧ ಇಲಾಖೆಗಳಲ್ಲಿ ಮಂಜೂರಾಗಿ ಖಾಲಿ ಇರುವ ಗ್ರೂಪ್-ಡಿ, ಹಾಗೂ ಗ್ರೂಪ್-ಸಿ ಹುದ್ದೆಗಳಾದ ವಾಹನ ಚಾಲಕರು, ದತ್ತಾಂಶ ನಮೂದು ಸಹಾಯಕ (ಬೆರಳಚ್ಚುಗಾರ) ಹುದ್ದೆಗಳಲ್ಲಿ 96,844 ಹುದ್ದೆಗಳನ್ನು ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ.<br>ಖಾಲಿ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ತಮ್ಮ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನುಸಾರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿ, ಆರ್ಥಿಕ ಇಲಾಖೆಯಿಂದ ಅನುಮೋದಿತವಾದ ಪ್ರಸ್ತಾವನೆಗಳಂತೆ ಖಾಲಿ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಲು ಕ್ರಮವಹಿಸುತ್ತವೆ.<br>ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2026, ದಿನಾಂಕ:27.02.2026ರಲ್ಲಿ, ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಲ್ಲಿ, ಸುಮಾರು 56,432 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಮುಂದಿನ 30 ದಿನಗಳಲ್ಲಿ ಪ್ರಾರಂಭಿಸುವಂತೆ ಎಲ್ಲಾ ಇಲಾಖೆ / ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ (ಅನುಬಂಧ-3) |

**ಕಡತ ಸಂಖ್ಯೆ: ಸಿಆಸುಇ 57 ರಾಪ 2026.**

(ಸಿದ್ದರಾಮಯ್ಯ)
ಮುಖ್ಯಮಂತ್ರಿ

## ಅನುಬಂಧ-1

### ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ), ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:999 (1039) ಕ್ಕೆ ಮಾಹಿತಿ

**ಇಲಾಖಾವಾರು ಹಾಗೂ ವರ್ಗವಾರು ಖಾಲಿಯಿರುವ ಹುದ್ದೆಗಳ ಸಂಖ್ಯೆ**

| ಕ್ರ. ಸಂ. | ಇಲಾಖೆ | ಖಾಲಿ ಹುದ್ದೆಗಳು | | | | |
|---|---|---|---|---|---|---|
| | | A | B | C | D | ಒಟ್ಟು |
| 1 | ಶಾಲಾ ಶಿಕ್ಷಣ ಮತ್ತು ಸಾಕ್ಷರತೆ | 1127 | 7231 | 66895 | 4441 | 79694 |
| 2 | ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ | 2522 | 1221 | 19721 | 14108 | 37572 |
| 3 | ಒಳಾಡಳಿತ | 435 | 608 | 25194 | 1951 | 28188 |
| 4 | ಉನ್ನತ ಶಿಕ್ಷಣ | 4355 | 134 | 4001 | 5109 | 13599 |
| 5 | ಪಶುಸಂಗೋಪನೆ | 1507 | 60 | 3259 | 6194 | 11020 |
| 6 | ಕಂದಾಯ | 107 | 344 | 6501 | 3915 | 10867 |
| 7 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | 492 | 640 | 7695 | 1677 | 10504 |
| 8 | ಪರಿಶಿಷ್ಟ ಜಾತಿಗಳ ಕಲ್ಯಾಣ | 68 | 63 | 1513 | 8002 | 9646 |
| 9 | ಹಿಂದುಳಿದ ವರ್ಗಗಳ ಕಲ್ಯಾಣ | 28 | 145 | 1740 | 6612 | 8525 |
| 10 | ಆರ್ಥಿಕ | 311 | 446 | 4871 | 2040 | 7668 |
| 11 | ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ | 2762 | 152 | -230 | 4975 | 7659 |
| 12 | ಕೃಷಿ | 74 | 3336 | 2259 | 1207 | 6876 |
| 13 | ಅರಣ್ಯ | 98 | 203 | 3979 | 2198 | 6478 |
| 14 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆಗಳ ಇಲಾಖೆ | 347 | 263 | 3834 | 1746 | 6190 |
| 15 | ಅಲ್ಪಸಂಖ್ಯಾತರ ಕಲ್ಯಾಣ | 86 | 620 | 1881 | 2385 | 4972 |
| 16 | ಸಹಕಾರ | 31 | 84 | 3454 | 1157 | 4726 |
| 17 | ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ | 98 | 471 | 2173 | 1268 | 4010 |
| 18 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | 144 | 193 | 2115 | 939 | 3391 |
| 19 | ರೇಷ್ಮೆ | 19 | 278 | 2661 | 379 | 3337 |
| 20 | ತೋಟಗಾರಿಕೆ | 22 | 4 | -239 | 3127 | 2914 |
| 21 | ಕಾರ್ಮಿಕ | 370 | 83 | 1212 | 1003 | 2668 |
| 22 | ಪರಿಶಿಷ್ಟ ಪಂಗಡಗಳ ಕಲ್ಯಾಣ | 12 | 17 | 761 | 1645 | 2435 |
| 23 | ಸಾರಿಗೆ | 30 | 209 | 1006 | 296 | 1541 |
| 24 | ಆಹಾರ ಮತ್ತು ನಾಗರೀಕ ಸರಬರಾಜು | 11 | 75 | 1032 | 324 | 1442 |
| 25 | ಲೋಕೋಪಯೋಗಿ | 284 | 416 | 1047 | 493 | 1408 |
| 26 | ನಗರಾಭಿವೃದ್ಧಿ | 268 | 55 | 522 | 69 | 914 |
| 27 | ಸಣ್ಣ ನೀರಾವರಿ | 111 | 113 | 483 | 162 | 869 |
| 28 | ಮೀನುಗಾರಿಕೆ | 11 | 84 | 97 | 646 | 838 |
| 29 | ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ | 33 | -28 | 609 | 107 | 721 |
| 30 | ಗಣಿ | 14 | 128 | 319 | 195 | 656 |
| 31 | ಭಾರಿ ನೀರಾವರಿ | 89 | 5 | 365 | 150 | 609 |
| 32 | ಕನ್ನಡ ಮತ್ತು ಸಂಸ್ಕೃತಿ | 16 | 60 | 173 | 195 | 444 |
| 33 | ಸಂಸದೀಯ ವ್ಯವಹಾರಗಳು | 62 | 9 | 249 | 113 | 433 |
| 34 | ಭಾರಿ ಮತ್ತು ಮಧ್ಯಮ ಕೈಗಾರಿಕೆ | 59 | 89 | 159 | 87 | 394 |
| 35 | ಪ್ರವಾಸೋದ್ಯಮ | 21 | 26 | 201 | 138 | 386 |
| 36 | ಸಣ್ಣ ಕೈಗಾರಿಕೆ | 20 | 46 | 251 | 43 | 360 |
| 37 | ವಾರ್ತಾ | 34 | 12 | 198 | 96 | 340 |
| 38 | ಯುವಜನ ಸೇವೆಗಳು | 12 | 20 | 94 | 86 | 212 |
| 39 | ಇಂಧನ | 20 | 49 | 75 | 43 | 187 |
| 40 | ಇ ಆಡಳಿತ | 45 | 25 | 3 | 0 | 73 |
| 41 | ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ | 6 | 21 | 23 | 11 | 61 |
| 42 | ಕೈಮಗ್ಗ ಮತ್ತು ಜವಳಿ | 3 | 2 | 31 | 8 | 44 |
| 43 | ಪರಿಸರ ಮತ್ತು ಜೀವಿಶಾಸ್ತ್ರ | 7 | 0 | 3 | 0 | 10 |
| | ಒಟ್ಟು | 16171 | 17180 | 172190 | 79340 | 284881 |

**ಅನುಬಂಧ-2**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ), ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:999 (1039) ಕ್ಕೆ ಮಾಹಿತಿ**

| ಕ್ರ.ಸಂ. | ಇಲಾಖಾವಾರು ನಿಗಮ ಮಂಡಳಿ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| | **ಕೃಷಿ ಇಲಾಖೆ** | |
| 1. | ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ | 325 |
| 2. | ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಗಮ ನಿಯಮಿತ.ಕಲಬುರಗಿ | 3 |
| | **ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ** | |
| 3. | ಕರ್ನಾಟಕ ಸಹಕಾರ ಒಕ್ಕೂಟ ಮಹಾಮಂಡಳಿ | 22 |
| 4. | ಕರ್ನಾಟಕ ಸಹಕಾರ ಹಾಲು ಒಕ್ಕೂಟ ನಿಯಮಿತ | 1702 |
| 5. | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ | 46 |
| 6. | ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ ಮಂಗಳೂರು. | 205 |
| 7. | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಕುರಿ ಭವನ, ಹೆಬ್ಬಾಳ, ಬೆಂಗಳೂರು | 165 |
| | **ಸಹಕಾರ ಇಲಾಖೆ** | |
| 8. | ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ | 132 |
| 9. | ಕರ್ನಾಟಕ ರಾಜ್ಯ ಉಗ್ರಾಣ ನಿಗಮ ನಿಯಮಿತ | 779 |
| | **ಪರಿಸರ ಮತ್ತು ಜೀವಿಶಾಸ್ತ್ರ** | |
| 10. | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ | 313 |
| 11. | ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ | 679 |
| 12. | ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕ ನಿಗಮ ನಿಯಮಿತ, ಬೆಂಗಳೂರು | 302 |
| 13. | ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತ | 260 |
| | **ಇಂಧನ ಇಲಾಖೆ** | |
| 14. | ಕೆಪಿಟಿಸಿಎಲ್ | 34474 |
| 15. | ಕೆಪಿಸಿಎಲ್ | 4635 |
| 16. | ಕ್ರೆಡಲ್ | 30 |
| 17. | ಕವಿಕ | 308 |
| 18. | ಎಂಇಐ | 302 |
| 19. | ವಿದ್ಯುತ್ ಪರಿವೀಕ್ಷಣಾಲಯ | 178 |
| 20. | ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ | 6543 |
| 21. | ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ | 4028 |
| 22. | ಚಾವಿಸನಿನಿ | 4105 |
| 23. | ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್. | 302 |
| | **ಆರ್ಥಿಕ ಇಲಾಖೆ** | |
| 24. | ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ | 17 |
| | **ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ** | |
| 25. | ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ | 1303 |
| | **ಒಳಾಡಳಿತ** | |
| 26. | ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ | 63 |
| | **ತೋಟಗಾರಿಕೆ** | |
| 27. | ಕರ್ನಾಟಕ ರಾಜ್ಯ ಸಹಕಾರಿ ತೋಟಗಾರಿಕೆ ಮಾರಾಟ ಮಹಾಮಂಡಳಿ (ನಿ) | 8 |
| 28. | ಕರ್ನಾಟಕ ದ್ರಾಕ್ಷಿ ಮತ್ತು ವೈನ್ ಬೋರ್ಡ್ | 1 |

| ಕ್ರ.ಸಂ. | ಇಲಾಖಾವಾರು ನಿಗಮ ಮಂಡಳಿ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 29. | ಕರ್ನಾಟಕ ರಾಜ್ಯ ಸಾಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ ಹುಬ್ಬಳ್ಳಿ | 7 |
| 30. | ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ | 2 |
| 31. | ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ನಿಯಮಿತ | 21 |
| 32. | ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಳೂರು ನಿಯಮಿತ | 0 |
| | **ವಸತಿ** | |
| 33. | ಕರ್ನಾಟಕ ಗೃಹ ಮಂಡಳಿ | 305 |
| 34. | ರಾಜೀವ್‌ಗಾಂಧಿ ಹೌಸಿಂಗ್ ಕಾರ್ಪೋರೇಷನ್ ಲಿಮಿಟೆಡ್ | 21 |
| 35. | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ | 209 |
| 36. | ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ | 21 |
| | **ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ** | |
| 37. | ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ | 43 |
| | **ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ** | |
| 38. | ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ | 868 |
| 39. | ಮೈಸೂರು ಪೇಂಟ್ಸ್ ವಾರ್ನಿಷ್ ಲಿಮಿಟೆಡ್ | 95 |
| 40. | ಕರ್ನಾಟಕ ಸ್ಟೇಟ್ ಮಾರ್ಕೇಟಿಂಗ್ ಕಮ್ಯೂನಿಕೇಷನ್ & ಅಡ್ವರ್ಟೈಸಿಂಗ್ | 61 |
| 41. | ಮೈಸೂರು ಸೇಲ್ಸ್ ಇಂಟರ್ನ್ಯಾಷನಲ್ ಲಿಮಿಟೆಡ್ | 297 |
| 42. | ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್ | 1358 |
| 43. | ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ | 1428 |
| 44. | ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ | 263 |
| 45. | ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ | 328 |
| 46. | ಕರ್ನಾಟ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಲಿಮಿಟೆಡ್ | 224 |
| 47. | ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ಲಿಮಿಟೆಡ್ | 11 |
| 48. | ಮೈಸೂರು ಸಕ್ಕರೆ ಕಂಪನಿ ಲಿಮಿಟೆಡ್ ಮಂಡ್ಯ | 1001 |
| 49. | ತುಮಕೂರು ಮಷಿನ್ ಟೂಲ್ ಪಾರ್ಕ್, ಬೆಂಗಳೂರು.(ವಿಶೇಷ ಉದ್ದೇಶಿತ ವಾಹನ SPV) | 1 |
| | **ಜಲ ಸಂಪನ್ಮೂಲ** | |
| 50. | ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ | 1274 |
| 51. | ಕಾವೇರಿ ನೀರಾವರಿ ನಿಗಮ ನಿಯಮಿತ | 1428 |
| 52. | ವಿಶ್ವೇಶ್ವರಯ್ಯ ನೀರಾವರಿ ನಿಗಮ ನಿಯಮಿತ | 643 |
| 53. | ಕರ್ನಾಟಕ ನೀರಾವರಿ ನಿಗಮ ನಿಯಮಿತ | 2310 |
| | **ಅಲ್ಪ ಸಂಖ್ಯಾತರ ಕಲ್ಯಾಣ** | |
| 54. | ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ | 60 |
| 55. | ಕರ್ನಾಟಕ ರಾಜ್ಯ ವಕ್ಫ ಬೋರ್ಡ್ | 225 |
| | **ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ** | |
| 56. | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಕಲಬುರ್ಗಿ | 17 |
| 57. | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗ | 22 |
| 58. | ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ | 12 |
| | **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್** | |
| 59. | ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಬಿವೃದ್ಧಿ ನಿಗಮ ನಿಯಮಿತ | 623 |
| | **ಸಮಾಜ ಕಲ್ಯಾಣ** | |
| 60. | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ | 3 |
| 61. | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ | 20 |
| 62. | ಡಾ|| ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ | 80 |

| ಕ್ರ.ಸಂ. | ಇಲಾಖಾವಾರು ನಿಗಮ ಮಂಡಳಿ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 63. | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು | 1 |
| 64. | ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ | 12 |
| 65. | ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ | 182 |
| | **ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ** | |
| 66. | ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ | 21 |
| 67. | ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮ | 6 |
| | **ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ** | |
| 68. | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ | 120 |
| 69. | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು | 27 |
| | **ಪ್ರವಾಸೋದ್ಯಮ** | |
| 70. | ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು | 150 |
| 71. | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ | 650 |
| 72. | ಅರಣ್ಯ ಮತ್ತು ವಿಹಾರ ಧಾಮಗಳ ಸಂಸ್ಥೆ | 481 |
| 73. | ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಲಭ್ಯ ನಿಗಮ ನಿಯಮಿತ | 6 |
| | **ಸಾರಿಗೆ** | |
| 74. | ಕೆ.ಎಸ್.ಆರ್.ಟಿ.ಸಿ. | 8590 |
| 75. | ಬಿ.ಎಂ.ಟಿ.ಸಿ., | 686 |
| 76. | ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ | 3302 |
| 77. | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲ್ಬುರ್ಗಿ | 2303 |
| 78. | ದೇವರಾಜ ಅರಸು ಟ್ರಕ್ ಟರ್ಮಿನಲ್ ಲಿಮಿಟೆಡ್, ಶಾಂತಿನಗರ (24 ಹುದ್ದೆಗಳಲ್ಲಿ ಹೊರಗುತ್ತಿಗೆ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ.) | 80 |
| | **ನಗರಾಭಿವೃದ್ಧಿ** | |
| 79. | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ | 840 |
| 80. | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ | 815 |
| 81. | ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ | 322 |
| 82. | ಕರ್ನಾಟಕ ನಗರ ಮೂಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ | |
| 83. | ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ | 2496 |
| 84. | ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ | 3211 |
| 85. | ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ | 434 |
| 86. | ದಾವಣಗೆರೆ ಸ್ಮಾರ್ಟ್ ಸಿಟಿ ಲಿಮಿಟೆಡ್ | 22 |
| 87. | ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ | 29 |
| 88. | ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್ | 0 |
| | **ಮೂಲಸೌಲಭ್ಯ ಅಭಿವೃದ್ಧಿ** | |
| 89. | ಕರ್ನಾಟಕ ಜಲಸಾರಿಗೆ ಮಂಡಳಿ (KARNATAKA MARITIME BOARD) | 281 |
| 90. | ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ (KSIIDC) | 102 |
| 91. | ರೈಲು ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಂಪನಿ (ಕರ್ನಾಟಕ) ಲಿಮಿಟೆಡ್ | 129 |
| 92. | ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ (ಕರ್ನಾಟಕ ಸರ್ಕಾರದ ಉದ್ಯಮ) | 42 |
| | **ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ** | |
| 93. | ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ | 6 |
| 94. | ಶ್ರೀ ಕಂಠೀರವ ಸ್ಟುಡಿಯೋಸ್ ನಿಯಮಿತ | 54 |

| ಕ್ರ.ಸಂ. | ಇಲಾಖಾವಾರು ನಿಗಮ ಮಂಡಳಿ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| | **ಮಹಿಳೆಯ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಇಲಾಖೆ** | |
| 95. | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ | 36 |
| | **ಕಾರ್ಮಿಕ ಇಲಾಖೆ** | |
| 96. | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ | 273 |
| | **ರೇಷ್ಮೆ** | |
| 97. | ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ | 846 |
| | **ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ** | |
| 98. | ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ | 221 |
| 99. | ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ. | 4 |
| | **ಕಂದಾಯ ಇಲಾಖೆ** | |
| 100. | ಕರ್ನಾಟಕ ರಾಜ್ಯ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ | 4 |
| | **ಒಟ್ಟು** | **101295** |

ಅನುಬಂಧ - 3

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022ರ ಅಧಿನಿಯಮದನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚಿಸಲಾದ ಮೀಸಲಾತಿ ಪ್ರಮಾಣವನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995, ದಿನಾಂಕ 20.06.1995
2. ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2022, ದಿನಾಂಕ: 28.12.2022
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2023, ದಿನಾಂಕ: 8.3.2023
5. ಸರ್ಕಾರದ ಆದೇಶ ಸಂಖ್ಯೆ: ಸಕಇ 8 ಎಸ್‌ಎಲ್‌ಪಿ 2024 (ಭಾ-1), ದಿನಾಂಕ: 25-08-2025
6. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 2 ಸೇಹಿಮ 2025, ದಿನಾಂಕ: 03-09-2025
7. ಮಾನ್ಯ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 200448 /2025, 17968/2025 ಮತ್ತು 3145/2023ರಲ್ಲಿ ದಿನಾಂಕ 27.11.2025ರಂದು ನೀಡಿರುವ ಮಧ್ಯಂತರ ಆದೇಶ.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ 20.06.1995ರ ಸರ್ಕಾರದ ಆದೇಶದಲ್ಲಿ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಕ್ರಮವಾಗಿ ನಿಗಧಿಪಡಿಸಲಾಗಿದ್ದ ಶೇ15 ಮತ್ತು ಶೇ 3 ಮೀಸಲಾತಿ ಪ್ರಮಾಣಕ್ಕೆ ಅನುಗುಣವಾಗಿ ಭರ್ತಿ ಮಾಡಬೇಕಾದ ರಿಕ್ತ ಸ್ಥಾನಗಳಿಗೆ 100 ಬಿಂದುಗಳ ರೋಸ್ಟರನ್ನು ನಿಗಧಿಪಡಿಸಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ರಲ್ಲಿ ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ರಾಜ್ಯದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಶೇ. 17 ಮತ್ತು ಶೇ.7 ರಂತೆ ಮೀಸಲಾತಿ ಪ್ರಮಾಣವನ್ನು ಅನುಕ್ರಮವಾಗಿ ಹೆಚ್ಚಿಸಲಾಗಿರುತ್ತದೆ.

3. ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2022ರ ಅಧಿನಿಯಮದನ್ವಯ ಹೆಚ್ಚಿನ ಮೀಸಲಾತಿ ಪ್ರಮಾಣಕ್ಕೆ ಅನುಗುಣವಾಗಿ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ರಿಕ್ತ ಸ್ಥಾನಗಳಿಗೆ ಸಂಬಂಧಿಸಿದಂತೆ 100 ಬಿಂದುಗಳ ಪರಿಷ್ಕೃತ ರೋಸ್ಟರನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

4. ಮೇಲೆ (4) ರಲ್ಲಿ ಓದಲಾದ ದಿನಾಂಕ 08.03.2023ರ ಸರ್ಕಾರದ ಆದೇಶದಲ್ಲಿ ಪ್ರತಿಯೊಂದು ನೇರ ಮೀಸಲಾತಿ ಪ್ರವರ್ಗದಡಿ (under each category of vertical reservation) ಮಾಜಿ ಸೈನಿಕ, ಅಂಗವಿಕಲ, ಮಹಿಳೆ, ಯೋಜನೆಗಳಿಂದ ನಿರ್ವಸಿತರಾದವರು, ಗ್ರಾಮೀಣ ಅಭ್ಯರ್ಥಿ, ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ ಮತ್ತು ತೃತೀಯ ಲಿಂಗಿಗಳಿಗೆ ಕಲ್ಪಿಸಲಾದ ಸಮತಳ ಮೀಸಲಾತಿಯನ್ನು ಜಾರಿಗೊಳಿಸಲು 100 ಬಿಂದುಗಳ ರೋಸ್ಟರನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

5. ಮೇಲೆ (5) ರಲ್ಲಿ ಓದಲಾದ ದಿನಾಂಕ 25.08.2025ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿಗಳಲ್ಲಿರುವ 101 ಜಾತಿಗಳನ್ನು ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಗಳೆಂದು 3 ಪ್ರವರ್ಗಗಳಾಗಿ ವರ್ಗೀಕರಿಸಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಪರಿಶಿಷ್ಟ ಜಾತಿಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಶೇಕಡ 17 ಮೀಸಲಾತಿಯನ್ನು, ಪ್ರವರ್ಗ-ಎ ರಲ್ಲಿನ ಸಮುದಾಯಗಳಿಗೆ ಶೇಕಡ 6, ಪ್ರವರ್ಗ-ಬಿ ರಲ್ಲಿನ ಸಮುದಾಯಗಳಿಗೆ ಶೇಕಡ 6 ಮತ್ತು ಪ್ರವರ್ಗ-ಸಿ ರಲ್ಲಿನ ಸಮುದಾಯಗಳಿಗೆ ಶೇಕಡ 5 ರಷ್ಟು ಮೀಸಲಾತಿಯನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

24/02/2026

6. ಮೇಲೆ (6) ರಲ್ಲಿ ಓದಲಾದ ದಿನಾಂಕ 03.09.2025ರ ಸರ್ಕಾರದ ಆದೇಶದಲ್ಲಿ ದಿನಾಂಕ 28.12.2022ರ ಆದೇಶದಲ್ಲಿ ನಿಗದಿಪಡಿಸಲಾಗಿದ್ದ 100 ಬಿಂದುಗಳ ಮೀಸಲಾತಿ ರೋಸ್ಟರಿನಲ್ಲಿ ಪರಿಶಿಷ್ಟ ಜಾತಿಗಳಿಗೆ ಗುರುತಿಸಲಾಗಿರುವ 17 ಬಿಂದುಗಳನ್ನು ಮಾತ್ರ ಸದರಿ ಆದೇಶದದಲ್ಲಿರುವ ಅನುಬಂಧದಂತೆ ಪುನರ್ ವರ್ಗೀಕರಿಸಿ ಆದೇಶಿಸಲಾಗಿರುತ್ತದೆ.

7. ಮೇಲೆ (7)ರಲ್ಲಿ ಓದಲಾದ ಪ್ರಕರಣಗಳಲ್ಲಿ, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ರನ್ವಯ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಪ್ರಮಾಣವನ್ನು ಕ್ರಮವಾಗಿ ಶೇ.15 ರಿಂದ ಶೇ.17ಕ್ಕೆ ಹಾಗೂ ಶೇ.3 ರಿಂದ ಶೇ.7ಕ್ಕೆ ಹೆಚ್ಚಿಸಲಾಗಿರುವುದನ್ನು ಪ್ರಶ್ನಿಸಲಾಗಿದ್ದು, ಸದರಿ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು **ದಿನಾಂಕ: 27.11.2025ರಂದು ಕೆಳಗಿನಂತೆ** ಮಧ್ಯಂತರ ಆದೇಶ ನೀಡಿರುತ್ತದೆ.

> 6. Considering that recruitment process has already begun pursuant to certain notifications specifying the enhanced reservation under the Karnataka Scheduled Castes and Scheduled Tribes (Reservation of Seats in Education Institutions and Appointments of Posts and Services under the State) Act, 2022 (hereafter Act), **we consider it apposite to modify our order dated 19.11.2025 to direct that no further notifications for recruitment or appointment on the basis of increased reservation would be issued till the disposal of the present petitions. The recruitment pursuant to the process that is already begun, may be continued. However, any appointment made shall be subject to the final outcome of the present petitions.**

8. ಮಾನ್ಯ ಉಚ್ಚ ನ್ಯಾಯಾಲಯವು ಮೇಲಿನಂತೆ ನೀಡಿರುವ ಮಧ್ಯಂತರ ಆದೇಶದಿಂದಾಗಿ ಹಲವಾರು ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆ

ಸ್ಥಗಿತಗೊಂಡಿದ್ದು, ನಿರುದ್ಯೋಗಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ತುರ್ತಾಗಿ ಮುಂದುವರೆಸಬೇಕಾಗಿರುವುದರಿಂದ ನೇಮಕಾತಿ ಅಧಿಸೂಚನೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೇಹಿಮ 2022, ದಿನಾಂಕ: 28-12-2022ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ (ಮೀಸಲಾತಿ ಪ್ರಮಾಣ ಶೇ.50ಕ್ಕೆ) ಹೊರಡಿಸುವುದು ಸೂಕ್ತವೆಂದು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2026,**

**ಬೆಂಗಳೂರು, ದಿನಾಂಕ: 27.02.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಸನ್ನಿವೇಶದಲ್ಲಿ, ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

1. ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟು ಹಾಗೂ ಸರ್ಕಾರದ ಮುಂದಿನ ಆದೇಶದವರೆಗೆ, ದಿನಾಂಕ 27.11.2025ರ ನಂತರದಲ್ಲಿ ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೇಹಿಮ 2022, ದಿನಾಂಕ: 28-12-2022ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ (ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995, ದಿನಾಂಕ 20.06.1995ರನ್ವಯ ಮೀಸಲಾತಿ ಪ್ರಮಾಣವನ್ನು ಶೇ.50ಕ್ಕೆ) ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸುವಂತೆ ಎಲ್ಲಾ ನೇಮಕಾತಿ/ಆಯ್ಕೆ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

2. ಈ ರೀತಿಯ ಆಯ್ಕೆಯನ್ನು ಹಿಂದಿನ ನೇಮಕಾತಿಯಲ್ಲಿ ಅಂದರೆ ದಿನಾಂಕ 28.12.2022ರ ಆದೇಶದಲ್ಲಿ ಗೊತ್ತುಪಡಿಸಿರುವ ರೋಸ್ಟರಿನ ಯಾವ ಬಿಂದುವಿನಲ್ಲಿ

ನಿಲ್ಲಿಸಲಾಗಿತ್ತೋ ಆ ಬಿಂದುವಿನ ಮುಂದಿನ ರೋಸ್ಟರ್ ಬಿಂದುವಿಗೆ ಸಾಂಸಮವಾದ ಬಿಂದುವನ್ನು ದಿನಾಂಕ 20.06.1995ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995ರಲ್ಲಿ ಗುರುತಿಸಿ ಅಲ್ಲಿಂದ ಪ್ರಾರಂಭಿಸಿ ಆಯ್ಕೆ ಮಾಡತಕ್ಕದ್ದು. (ಉದಾಹರಣೆಗೆ ಹಿಂದಿನ ನೇಮಕಾತಿಯಲ್ಲಿ ದಿನಾಂಕ 28.12.2022ರ ಆದೇಶದಲ್ಲಿ ಗೊತ್ತುಪಡಿಸಿರುವ ರೋಸ್ಟರಿನ ಅನುಸಾರ 10 ನೇ ಬಿಂದುವಿನವರೆಗೆ ಪೂರ್ಣಗೊಳಿಸಲಾಗಿದ್ದಲ್ಲಿ, ಈಗ ಮಾಡಬೇಕಾಗಿರುವ ಆಯ್ಕೆಯನ್ನು ದಿನಾಂಕ 20.06.1995ರ ಆದೇಶದಲ್ಲಿನ ಅನುಬಂಧ-1ರ ರೋಸ್ಟರಿನ 11 ನೇ ಬಿಂದುವಿನಿಂದ ಪ್ರಾರಂಭಿಸಿ ಪೂರ್ಣಗೊಳಿಸತಕ್ಕದ್ದು).

3. ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ 27.11.2025ರ ಮಧ್ಯಂತರ ಆದೇಶಕ್ಕಿಂತ ಹಿಂದೆ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಿರುವ ಪ್ರಕರಣಗಳನ್ನು ಯಥಾಪ್ರಕಾರ ಮುಂದುವರೆಸಿ, ಅಂತಿಮಗೊಳಿಸುವುದು ಹಾಗೂ ನೇಮಕಾತಿ ಆದೇಶದಲ್ಲಿ ಸ್ಪಷ್ಟವಾಗಿ ಈ ನೇಮಕಾತಿಯು ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೊಳಪಟ್ಟಿರುತ್ತದೆಂದು ಷರಾ ದಾಖಲಿಸತಕ್ಕದ್ದು.

4. ಸಮತಳ ಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2023, ದಿನಾಂಕ: 8.3.2023ರಲ್ಲಿ ನಿಗಧಿಪಡಿಸಲಾಗಿರುವ ರೋಸ್ಟರ್ ಬಿಂದುಗಳನ್ನೇ ಮುಂದುವರೆಸುವುದು. ಹಿಂದಿನ ನೇಮಕಾತಿಯಲ್ಲಿ ದಿನಾಂಕ 08.03.2023 ಆದೇಶದಲ್ಲಿ ಗೊತ್ತುಪಡಿಸಿರುವ ರೋಸ್ಟರಿನ ಯಾವ ಬಿಂದುವಿನಲ್ಲಿ ನಿಲ್ಲಿಸಲಾಗಿತ್ತೋ ಆ ಬಿಂದುವಿನ ಮುಂದಿನ ರೋಸ್ಟರ್ ಬಿಂದುವಿನಿಂದ ಪ್ರಾರಂಭಿಸಿ ಆಯ್ಕೆ ಮಾಡತಕ್ಕದ್ದು.

5. ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟು ಆಯಾ ಇಲಾಖೆಗಳು /ನೇಮಕಾತಿ ಪ್ರಾಧಿಕಾರಗಳು ಮುಂದಿನ ನೇಮಕಾತಿ ಮಾಡಿಕೊಳ್ಳುವ ಹುದ್ದೆಗಳಲ್ಲಿ ಶೇ 6 ರಷ್ಟು (ಪರಿಶಿಷ್ಟ ಜಾತಿಗೆ ಶೇ.2 ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.4) ಹುದ್ದೆಗಳನ್ನು ಕಾಯ್ದಿರಿಸತಕ್ಕದ್ದು.

6. ಮುಂದುವರೆದು, ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಲ್ಲಿ ಸುಮಾರು 56432 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಮುಂದಿನ 30 ದಿನಗಳಲ್ಲಿ ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳಿಗೆ / ನೇಮಕಾತಿ ಪ್ರಾಧಿಕಾರಗಳಿಗೆ ತಿಳಿಸಿದೆ.

ಮೇಲಿನ ಸೂಚನೆಗಳು ಸರ್ಕಾರದ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

27/02/2026

(ಆಶಾ ಕುಮಾರಿ ಎ. ಜೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು).

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 50 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಎ), ಕೊಠಡಿ ಸಂಖ್ಯೆ-31, ವಿಧಾನಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿ:**
1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು/ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು

7. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. *ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ನವದೆಹಲಿ.
9. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಪ್ರಾದೇಶಿಕ ಆಯುಕ್ತರು.
16. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
17. ಸರ್ಕಾರದ ಅಪರ ಕಾರ್ಯದರ್ಶಿ (ಸಚಿವ ಸಂಪುಟ) (ಪ್ರಕರಣ ಸಂಖ್ಯೆ ಸಿ.138/2026)
18. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

(*ಮುಖ ಪತ್ರದೊಂದಿಗೆ)